1

# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 518 |
| 2. | ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | : | 20.08.2026 |
| 4. | ಉತ್ತರಿಸುವ ಸಚಿವರು | : | ಮುಖ್ಯಮಂತ್ರಿ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು, ನಿಗಮಗಳು ಮಂಡಳಿಗಳು ಹಾಗೂ ಅಧೀನ ಸಂಸ್ಥೆಗಳಲ್ಲಿ ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮಗಳ (Cader and Recurement) (C&R) Rules ಇನ್ನೂ ರೂಪಿಸದಿರುವ/ ಪರಿಷ್ಕರಿಸದಿರುವ ಇಲಾಖೆಗಳು ಮತ್ತು ಇತರ ಸರಕಾರಿ ಸಂಸ್ಥೆಗಳ ಸಂಖ್ಯೆ ಎಷ್ಟು; | ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿಕೊಂಡಿರುತ್ತವೆ.<br><br>ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕನಿಷ್ಠ ಮೂರು ವರ್ಷಗಳಿಗೊಮ್ಮೆ ಪರಿಷ್ಕರಿಸುವಂತೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 97 ಸೇನಿಿ 2004, ದಿನಾಂಕ:08.10.2004 ರಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ.<br><br>ಸಮಗ್ರ ತಿದ್ದುಪಡಿಯನ್ನು ಕೈಗೊಳ್ಳಲು ಅನುವಾಗುವಂತೆ, ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಎಲ್ಲಾ ಸರ್ಕಾರದ ಆದೇಶಗಳು/ ಮಾರ್ಗಸೂಚಿಗಳನ್ನು ಸೇರಿದಂತೆ, ಕೈಪಿಡಿಯನ್ನು ದಿನಾಂಕ:06.08.2025 ರ ಸರ್ಕಾರಿ ಆದೇಶದಲ್ಲಿ ನೀಡಲಾಗಿರುತ್ತದೆ.<br><br>ಅಲ್ಲದೇ, ಸಚಿವಾಲಯದ ಎಲ್ಲಾ ಇಲಾಖೆಗಳಲ್ಲಿನ ಕ್ಷೇತ್ರ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರವಾಗಿ ತಿದ್ದುಪಡಿ ತರಲು, ಎಲ್ಲಾ ಅಧಿಕಾರಿ/ ಸಿಬ್ಬಂದಿ ವರ್ಗದವರಿಗೆ ತರಬೇತಿಯನ್ನು ನೀಡಲಾಗಿರುತ್ತದೆ.<br><br>ಸ್ಥಳೀಯ ಸಂಸ್ಥೆಗಳು, ನಿಗಮ, ಮಂಡಳಿ ಮತ್ತು ಸ್ವಾಯತ್ತ ಸಂಸ್ಥೆಗಳು ಹೊಸದಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಿ ಅಂತಿಮಗೊಳಿಸುವಂತೆ ದಿನಾಂಕ: 25.09.2019ರ ಸುತ್ತೋಲೆ ಸಂಖ್ಯೆ: ಸಿಆಸುಇ 66 ಸೇನಿಿ 2019 ರಲ್ಲಿ ಸೂಚನೆಗಳನ್ನು ನೀಡಲಾಗಿದೆ. |
| (ಆ) | ವೃಂದ ಮತ್ತು ನೇಮಕಾತಿ ನಿಯಮಗಳು ಇಲ್ಲದಿರುವ ಸಂದರ್ಭದಲ್ಲಿ Societies Registration Act, ಸ್ವಾಯತ್ತ ಸಂಸ್ಥೆಗಳ ನಿಯಮಗಳು ತಾತ್ಕಾಲಿಕವಾಗಿ/Ad-hoc/Stop- | ರಾಜ್ಯದಲ್ಲಿರುವ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತಿರುವ (ಆಟೋನೊಮಸ್) ಸಂಸ್ಥೆಗಳು ಸೇರಿದಂತೆ ಎಲ್ಲಾ ಸರ್ಕಾರೇತರ/ ಸ್ವಾಯತ್ತ/ ಸಾರ್ವಜನಿಕ ಉದ್ದಿಮೆಗಳಲ್ಲಿನ ಹುದ್ದೆಗಳಿಗೆ ನೇಮಕಾತಿ ಕುರಿತಂತೆ ಅವುಗಳ ಸೃಜನೆಗೆ |

| | | |
|---|---|---|
| | gap ನೇಮಕಾತಿ ಅಥವಾ ಇತರ ವ್ಯವಸ್ಥೆಗಳ ಮೂಲಕ ವರ್ಷಗಳಿಂದ ಸಿಬ್ಬಂದಿಯನ್ನು ನೇಮಿಸಿಕೊಂಡು ಅದೇ ಕೆಲಸವನ್ನು ಸರ್ಕಾರಿ ಇಲಾಖೆಗಳ ಅಧಿಕೃತ ಕಾರ್ಯದ ಭಾಗವಾಗಿ ನಿರ್ವಹಿಸುತ್ತಿರುವ ಹುದ್ದೆಗಳು ಎಷ್ಟಿವೆ; ಇಂತಹ ಸಿಬ್ಬಂದಿಗೆ ನಿಗದಿತ ವೇತನ ಶ್ರೇಣಿ, ಸೇವಾ ಭದ್ರತೆ, ಬಡ್ತಿ, ವರ್ಗಾವಣೆ, ಪಿಂಚಣಿ ಹಾಗೂ ಇತರ ಸೇವಾ ಸೌಲಭ್ಯಗಳು ಸಮರ್ಪಕವಾಗಿ ಅನ್ವಯವಾಗದಿರಲು ಇರುವ ಕಾರಣವೇನು; | ಆಧಾರವಾಗಿರುವ ಅಧಿನಿಯಮ, ನಿಯಮ, ಸಂಸ್ಥೆಗಳ Memorandum of Association, Articles of Association, By-laws & Regulations ರಡಿಯಲ್ಲಿ ತಮ್ಮದೇ ಆದ ಸೇವಾ ನಿಯಮ/ವಿನಿಯಮನಗಳನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ರಚಿಸಿಕೊಳ್ಳಬೇಕಾಗುತ್ತದೆ.<br><br>ಸರ್ಕಾರೇತರ/ ಸ್ವಾಯತ್ತ/ ಸಾರ್ವಜನಿಕ ಉದ್ದಿಮೆಗಳಲ್ಲಿನ ಹುದ್ದೆಗಳಿಗೆ ಮತ್ತು ವಿಶ್ವವಿದ್ಯಾಲಯಗಳಲ್ಲಿನ ಹುದ್ದೆಗಳಿಗೆ ನೇಮಕ ಮಾಡಬೇಕಾದಲ್ಲಿ, ಅವುಗಳನ್ನು ಕಾನೂನಿನ ಚೌಕಟ್ಟಿನಲ್ಲಿಯೇ ಮಾಡಬೇಕು. ಅಂದರೆ, ಅವುಗಳಿಗೆ ಅನ್ವಯವಾಗುವ ಅಧಿನಿಯಮ ಇತ್ಯಾದಿಗಳಡಿ ರಚಿಸಿರುವ ನೇಮಕಾತಿ ನಿಬಂಧನೆಗಳ (regulation) / ಶಾಸನಗಳ (statutes) ಇತ್ಯಾದಿಗಳ ಅಡಿಯಲ್ಲಿಯೇ ಮಾಡಬೇಕು.<br><br>ವೃಂದ ಮತ್ತು ನೇಮಕಾತಿ ನಿಯಮಗಳು ಇಲ್ಲದಿರುವ ಸಂದರ್ಭದಲ್ಲಿ, ಹುದ್ದೆಗಳನ್ನು ತಾತ್ಕಾಲಿಕವಾಗಿ/Ad-hoc ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ. |
| (ಇ) | ವೃಂದ ಮತ್ತು ನೇಮಕಾತಿ ನಿಯಮಗಳು ರೂಪಿಸದ ತಾತ್ಕಾಲಿಕ ವ್ಯವಸ್ಥೆಯನ್ನು ಮುಂದುವರಿಸುವುದರಿಂದ ಉಂಟಾಗುವ ಕಾನೂನು ಆಡಳಿತಾತ್ಮಕ ಹಾಗೂ ಆರ್ಥಿಕ ಸಮಸ್ಯೆಗಳ ಕುರಿತು DPAR ಪರಿಶೀಲನೆ ನಡೆಸಿದೆಯೇ; | |
| (ಈ) | ಎಲ್ಲಾ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿ ಅಗತ್ಯವಿದ್ದಲ್ಲಿ ಪರಿಷ್ಕರಿಸಿ ನಿಗದಿತ ಕಾಲಮಿತಿ ಒಳಗೆ ನಿಯಮಿತ ನೇಮಕಾತಿ ವ್ಯವಸ್ಥೆ ಜಾರಿಗೆ ತರಲು ಇಲಾಖೆಯವರು ಕಾರ್ಯಯೋಜನೆ ಮತ್ತು ಅಂತಿಮ ಕಾಲ ಮಿತಿ ನಿಗದಿಪಡಿಸಲಾಗಿದೆಯೇ; ಇಲ್ಲದಿದ್ದರೆ ಎಷ್ಟು ಅವಧಿಯೊಳಗೆ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು? | ರಾಜ್ಯ ಸರ್ಕಾರದ ಅಡಿಯಲ್ಲಿ ಬರುವ ಎಲ್ಲಾ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳು ರಚಿತವಾಗಿರುತ್ತವೆ.<br><br>ಇಲಾಖೆಗಳಲ್ಲಿರುವ ಕೆಲವು ಹುದ್ದೆಗಳನ್ನು ಹೊಸದಾಗಿ ಸೃಜಿಸಿರುವುದನ್ನು, ರದ್ದುಪಡಿಸಿರುವುದನ್ನು ಮತ್ತು ವಿದ್ಯಾರ್ಹತೆಯನ್ನು ಬದಲಾಯಿಸುವುದನ್ನು ಸೇರಿದಂತೆ, ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕನಿಷ್ಠ ಮೂರು ವರ್ಷಗಳಿಗೊಮ್ಮೆ ಪರಿಷ್ಕರಿಸುವಂತೆ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 97 ಸೇನಿಡಿ 2004, ದಿನಾಂಕ:08.10.2004 ರಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ.<br><br>ಸರ್ಕಾರದ ವಿವಿಧ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ತಿದ್ದುಪಡಿ ಮಾಡುವ ಕಾರ್ಯವು ಪ್ರಗತಿಯಲ್ಲಿದ್ದು, ಇದುವರೆವಿಗೂ 14 ಕ್ಷೇತ್ರ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಲಾಗಿರುತ್ತದೆ. |

ಸಂಖ್ಯೆ: ಸಿಆಸುಇ 156 ಸೇನಿಡಿ 2026

(ಡಿ.ಕೆ. ಶಿವಕುಮಾರ್)
ಮುಖ್ಯಮಂತ್ರಿ